**All India Radio: Bangalore**
**National Bulletin In Kannada**
**04.10.2025  1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**04.10.2025  1.10 p.m.**

**<><><><>**

ಮುಖ್ಯಾಂಶಗಳು

1. ೬೨ ಸಾವಿರ ಕೋಟಿಗೂ ಹೆಚ್ಚು ಮೌಲ್ಯದ ವಿವಿಧ ಯುವ-ಕೇಂದ್ರಿತ ಉಪಕ್ರಮಗಳಿಗೆ ನವದೆಹಲಿಯಲ್ಲಿಂದು ಪ್ರಧಾನಿ ನರೇಂದ್ರ ಮೋದಿ ಚಾಲನೆ
2. ಸ್ವಸ್ಥ ನಾರಿ - ಸಶಕ್ತ ಪರಿವಾರ ಅಭಿಯಾನದಡಿ ೬ ಕೋಟಿ ೫೦ ಲಕ್ಷ ಮಹಿಳೆಯರ ಆರೋಗ್ಯ ತಪಾಸಣೆ - ಕೇಂದ್ರ ಸಚಿವ ಜೆ.ಪಿ. ನಡ್ಡಾ
3. ಮಕ್ಕಳಿಗೆ ಕೆಮ್ಮಿನ ಸಿರಪ್ ಶಿಫಾರಸ್ಸು ಮಾಡುವ ಮೊದಲು ಎಚ್ಚರಿಕೆ ವಹಿಸುವಂತೆ ಎಲ್ಲಾ ರಾಜ್ಯಗಳಿಗೆ ಕೇಂದ್ರ ಸರ್ಕಾರ ಸೂಚನೆ
4. ಒತ್ತೆಯಾಳು ಬಿಡುಗಡೆ ಕುರಿತ ಹಮಾಸ್ ನಿರ್ಧಾರ ಸ್ವಾಗತಿಸಿದ ಜಾಗತಿಕ ನಾಯಕರು
5. ಟೆಸ್ಟ್ ಕ್ರಿಕೆಟ್ ಸರಣಿ; ಮೊದಲ ಪಂದ್ಯದಲ್ಲಿ ವೆಸ್ಟ್ ಇಂಡೀಸ್ ವಿರುದ್ಧ ಗೆಲುವಿನ ತವಕದಲ್ಲಿ ಭಾರತ

<><><><>

ನವದೆಹಲಿಯಲ್ಲಿಂದು ೬೨ ಸಾವಿರ ಕೋಟಿ ರೂಪಾಯಿಗೂ ಹೆಚ್ಚು ಮೌಲ್ಯದ ವಿವಿಧ ಯುವ-ಕೇಂದ್ರಿತ ಉಪಕ್ರಮಗಳನ್ನು ಪ್ರಧಾನಿ ನರೇಂದ್ರ ಮೋದಿ ಅನಾವರಣಗೊಳಿಸಿದರು. ಯುವ ಕೌಶಲ್ಯಕ್ಕಾಗಿ ಒಂದು ಐತಿಹಾಸಿಕ ಉಪಕ್ರಮದಲ್ಲಿ, ದೇಶಾದ್ಯಂತ ಒಂದು ಸಾವಿರ ಸರ್ಕಾರಿ ಐಟಿಐಗಳ ಮೇಲ್ದರ್ಜೆಗೇರಿಸುವ ಪಿಎಂ-ಸೇತುಗೆ ಪ್ರಧಾನಿ ಚಾಲನೆ ನೀಡಿದರು. ನವದೆಹಲಿಯಲ್ಲಿ ನಡೆದ ಕೌಶಲ್ ದೀಕ್ಷಾಂತ್ ಸಮಾರಂಭದಲ್ಲಿ ಪ್ರಧಾನಿ, ಅಖಿಲ ಭಾರತ ವ್ಯಾಪಾರ ಪರೀಕ್ಷೆ - ಎಐಟಿಟಿ ೨೦೨೫ರಲ್ಲಿ ಅತ್ಯುತ್ತಮ ಅಂಕಗಳೊಂದಿಗೆ ಉತ್ತೀರ್ಣರಾದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪುರಸ್ಕಾರ ಪ್ರದಾನ ಮಾಡಿದರು. ಬಳಿಕ ವರ್ಚುವಲ್ ಮೂಲಕ ಪ್ರಧಾನಿ, ಬಿಹಾರದ ಅಭಿವೃದ್ಧಿಗಾಗಿ ಹಲವು ಉಪಕ್ರಮಗಳಿಗೆ ಚಾಲನೆ ನೀಡಿದರು. ಇದರ ಭಾಗವಾಗಿ ಬಿಹಾರದ ಪರಿಷ್ಕೃತ ಮುಖ್ಯಮಂತ್ರಿ ನಿಶ್ಚಯ್ ಸ್ವಯಂ ಸಹಾಯತ ಭತ್ಯ ಯೋಜನೆಯನ್ನು

ಉದ್ಘಾಟಿಸಲಾಯಿತು. ಇದು ಐದು ಲಕ್ಷ ಪದವೀಧರರಿಗೆ ಎರಡು ವರ್ಷಗಳ ಕಾಲ ಒಂದು ಸಾವಿರ ರೂಪಾಯಿಗಳ ಮಾಸಿಕ ಭತ್ಯೆ ಒದಗಿಸುತ್ತದೆ. ಕೈಗಾರಿಕಾ ಆಧಾರಿತ ಕೋರ್ಸ್‌ಗಳು ಮತ್ತು ವೃತ್ತಿಪರ ಶಿಕ್ಷಣ ಉತ್ತೇಜಿಸಲು ಬಿಹಾರದಲ್ಲಿ ಜನ್ ನಾಯಕ್ ಕರ್ಪೂರಿ ಠಾಕೂರ್ ಕೌಶಲ್ಯ ವಿಶ್ವವಿದ್ಯಾಲಯವನ್ನು ಪ್ರಧಾನಿ, ಉದ್ಘಾಟಿಸಿದರು. ಬಿಹಾರದ ನಾಲ್ಕು ವಿಶ್ವವಿದ್ಯಾಲಯಗಳಲ್ಲಿ ಹೊಸ ಶೈಕ್ಷಣಿಕ ಮತ್ತು ಸಂಶೋಧನಾ ಸೌಲಭ್ಯಗಳಿಗೆ ಅವರು ಶಂಕುಸ್ಥಾಪನೆ ನೆರವೇರಿಸಿದರು. ಮತ್ತು ಬಿಹ್ತಾದಲ್ಲಿ ಎನ್‌ಐಟಿ ಪಾಟ್ನಾದ ಹೊಸ ಕ್ಯಾಂಪಸ್ ಅನ್ನು ಲೋಕಾರ್ಪಣೆ ಮಾಡಿದರು. ೩೪ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ೪೦೦ ನವೋದಯ ವಿದ್ಯಾಲಯಗಳು ಮತ್ತು ೨೦೦ ಏಕಲವ್ಯ ಮಾದರಿ ವಸತಿ ಶಾಲೆಗಳಲ್ಲಿ ಸ್ಥಾಪಿಸಲಾದ ಒಂದು ಸಾವಿರದ ಇನ್ನೂರು ವೃತ್ತಿಪರ ಕೌಶಲ್ಯ ಪ್ರಯೋಗಾಲಯಗಳನ್ನು ಇದೇ ವೇಳೆ ಪ್ರಧಾನಿ ನರೇಂದ್ರ ಮೋದಿ ಉದ್ಘಾಟಿಸಿದರು. ನಂತರ ಸಭೆಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, ದೇಶದ ಯುವಕರು ಹಾಗೂ ವಿದ್ಯಾರ್ಥಿಗಳಿಗಾಗಿ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿಯ ಎರಡು ನೂತನ ಉಪಕ್ರಮಗಳಿಗೆ ಇಂದು ಚಾಲನೆ ನೀಡಲಾಗಿದೆ. ಎಲ್ಲಿಯವರೆಗೆ ನಾವು ಶ್ರಮಕ್ಕೆ ಅದರದೇ ಆದ ಮಹತ್ವ ನೀಡುವುದಿಲ್ಲವೋ, ಪ್ರತಿಭಾವಂತರಿಗೆ ಸಾರ್ವಜನಿಕ ಜೀವನದಲ್ಲಿ ಗೌರವ ದೊರಕಿಸಿ ಕೊಡುವುದಿಲ್ಲವೋ ಅವರು ಕೀಳರಿಮೆ ಅನುಭವಿಸುವ ಸಾಧ್ಯತೆ ಇರುತ್ತದೆ. ನಾವು ಶ್ರಮ ಏವ ಜಯತೆಯೊಂದಿಗೆ ಶ್ರಮ ಏವ ಪೂಜ್ಯತೆಗೂ ಮಹತ್ವ ನೀಡುತ್ತೇವೆ ಎಂದರು.

*****ಧ್ವನಿ ***ಪ್ರಧಾನಿ (೩೭ ಸೆಕೆಂಡ್‌ಗಳು)**

<><><><>

ಸ್ವಸ್ಥ ನಾರಿ - ಸಶಕ್ತ ಪರಿವಾರ ಅಭಿಯಾನದಡಿ ೬ ಕೋಟಿ ೫೦ ಲಕ್ಷ ಮಹಿಳೆಯರ ಆರೋಗ್ಯ ತಪಾಸಣೆ ಮೂಲಕ ಐತಿಹಾಸಿಕ ಮೈಲಿಗಲ್ಲು ಸಾಧಿಸಲಾಗಿದೆ ಎಂದು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜೆ.ಪಿ. ನಡ್ಡಾ ಹೇಳಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ದೇಶಾದ್ಯಂತ ಕಳೆದ ತಿಂಗಳ ೧೭ರಂದು ಪ್ರಧಾನಿ ನರೇಂದ್ರ ಮೋದಿ ಅವರು ಚಾಲನೆ ನೀಡಿದ್ದ ಸ್ವಸ್ಥನಾರಿ - ಸಶಕ್ತ ಪರಿಹಾರ ಅಭಿಯಾನದಡಿ ಎರಡು ವಾರಗಳ ಕಾಲ ಅಕ್ಟೋಬರ್ ೨ರ ವರೆಗೆ ದೇಶಾದ್ಯಂತ ೧೮ ಲಕ್ಷ ಆರೋಗ್ಯ ಶಿಬಿರಗಳನ್ನು ನಡೆಸಲಾಗಿದೆ ಎಂದು ತಿಳಿಸಿದ್ದಾರೆ. ಅಭಿಯಾನದ ಯಶಸ್ಸು ಮಹಿಳೆಯರ ಆರೋಗ್ಯದ ಬಗ್ಗೆ ರಾಷ್ಟ್ರದ ಸಾಮೂಹಿಕ

ಸಂಕಲ್ಪವನ್ನು ಪ್ರತಿಬಿಂಬಿಸುತ್ತದೆ ಮತ್ತು ಪ್ರತಿಯೊಬ್ಬ ಮಹಿಳೆಯು ಆಗಾಗ್ಗೆ ತಮ್ಮ ಆರೋಗ್ಯದ ಬಗ್ಗೆ ತಪಾಸಣೆ ಮಾಡಿಸಿಕೊಂಡು ಯೋಗಕ್ಷೇಮಕ್ಕೆ ಆದ್ಯತೆ ನೀಡಲು ಉತ್ತೇಜಿಸುತ್ತದೆ. ಇದರಿಂದಾಗಿ ಕುಟುಂಬದ ಆರೋಗ್ಯವು ಸುಧಾರಿಸಲಿದೆ ಎಂದು ಜೆ.ಪಿ. ನಡ್ಡಾ ಹೇಳಿದ್ದಾರೆ.

<><><><>

ಮಕ್ಕಳಿಗೆ ಕೆಮ್ಮಿನ ಸಿರಪ್ ನೀಡುವಾಗ ಬಹಳ ಎಚ್ಚರಿಕೆಯಿಂದ ಇರಬೇಕು ಎಂದು ಕೇಂದ್ರ ಸರ್ಕಾರ ಎಲ್ಲ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ಸೂಚನೆ ನೀಡಿದೆ. ಈ ಕುರಿತಂತೆ ಕೇಂದ್ರ ಆರೋಗ್ಯ ಸಚಿವಾಲಯ ಸೂಚನೆ ಹೊರಡಿಸಿದ್ದು, ಎರಡು ವರ್ಷದೊಳಗಿನ ಮಕ್ಕಳಿಗೆ ಕೆಮ್ಮು ಅಥವಾ ಶೀತ ಔಷಧಿಗಳನ್ನು ಶಿಫಾರಸ್ಸು ಮಾಡಬಾರದು ಹಾಗೂ ನೀಡಬಾರದು ಎಂದು ತಿಳಿಸಿದೆ. ಅಲ್ಲದೇ, ಐದು ವರ್ಷದೊಳಗಿನ ಮಕ್ಕಳಿಗೆ ಸಾಮಾನ್ಯವಾಗಿ ಕೆಮ್ಮಿನ ಸಿರಫ್ ಗಳನ್ನು ಶಿಫಾರಸ್ಸು ಮಾಡುವುದಿಲ್ಲ. ಐದಕ್ಕಿಂತ ಮೇಲ್ಪಟ್ಟ ಮಕ್ಕಳಿಗೆ ನೀಡುವಾಗ ಎಚ್ಚರಿಕೆ ವಹಿಸಿ, ವೈದ್ಯಕೀಯ ಮಾನದಂಡಗಳನ್ನು ಅನುಸರಿಸಬೇಕು. ನಿಕಟ ಮೇಲ್ವಿಚಾರಣೆ ಮತ್ತು ಸೂಕ್ತ ಡೋಸ್‌ಗಳನ್ನು ಪಾಲಿಸಬೇಕು ಎಂದು ಸಚಿವಾಲಯ ತಿಳಿಸಿದೆ. ರಾಜಸ್ತಾನದಲ್ಲಿ ಕೆಮ್ಮಿನ ಸಿರಪ್ ನಲ್ಲಿ ಡೆಕ್ಸ್ಟ್ರೋ ಮೆಥೋರ್ಫಾನ್ ಅಂಶ ಹೆಚ್ಚಿದ್ದು, ಅದರ ಸೇವನೆಯಿಂದ ಹಲವು ಮಕ್ಕಳು ಅಸ್ವಸ್ಥರಾಗಿರುವ ಹಿನ್ನೆಲೆಯಲ್ಲಿ ಅಲ್ಲಿನ ಸರ್ಕಾರ ಕೆಮ್ಮು ಸಿರಫ್ ಬಳಕೆಯನ್ನು ಸಂಪೂರ್ಣ ನಿಷೇಧಿಸಿರುವುದಲ್ಲದೇ, ಸಮಗ್ರ ತನಿಖೆಗೆ ಆದೇಶಿಸಿದೆ.

<><><><>

ಗಾಜಾದಲ್ಲಿರುವ ಒತ್ತೆಯಾಳುಗಳ ಬಿಡುಗಡೆ ಕುರಿತ ಹಮಾಸ್‌ನ ನಿರ್ಧಾರ ಮತ್ತು ಅಮೆರಿಕ ನೇತೃತ್ವದ ಶಾಂತಿ ಮಾತುಕತೆಗೆ ಉತ್ಸುಕತೆ ತೋರಿರುವುದನ್ನು ಜಾಗತಿಕ ನಾಯಕರು ಸ್ವಾಗತಿಸಿದ್ದಾರೆ. ಇದು ಪ್ರಸ್ತುತ ನಡೆಯುತ್ತಿರುವ ಸಂಘರ್ಷಕ್ಕೆ ಪ್ರಮುಖ ಸಕಾರಾತ್ಮಕ ತಿರುವು ನೀಡಲಿದೆ ಎಂದು ಹಲವರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಇದೇ ವೇಳೆ, ಗಾಜಾ ಪಟ್ಟಿಯಲ್ಲಿ ಸ್ಥಿರತೆ ಮತ್ತು ಶಾಂತಿ ನೆಲೆಸುವ ನಿಟ್ಟಿನಲ್ಲಿ ನಡೆಯುವ ಎಲ್ಲ ಪ್ರಯತ್ನಗಳನ್ನು ಭಾರತ ಪ್ರಬಲವಾಗಿ ಬೆಂಬಲಿಸುವುದನ್ನು ಮುಂದುವರೆಸಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಅವರು ತಮ್ಮ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಗಾಜಾ ಪಟ್ಟಿಯಲ್ಲಿ ಶಾಂತಿ ನೆಲೆಸುವಂತೆ ಮಾಡುವ ನಿಟ್ಟಿನಲ್ಲಿ ಅಮೇರಿಕ ಅಧ್ಯಕ್ಷ ಡೋನಾಲ್ಡ್ ಟ್ರಂಪ್ ನಾಯಕತ್ವದಲ್ಲಿ ನಡೆಯುತ್ತಿರುವ ನಿರ್ಣಾಯಕ

ಮಾತುಕತೆ ಪ್ರಗತಿಯನ್ನು ಭಾರತ ಸ್ವಾಗತಿಸುತ್ತದೆ ಎಂದು ಹೇಳಿದ್ದಾರೆ. ಒತ್ತೆಯಾಳುಗಳ ಬಿಡುಗಡೆ ಸೂಚನೆ ದೊರೆತಿರುವುದು ಶಾಂತಿ ಸ್ಥಾಪನೆಯ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯಾಗಿದೆ ಎಂದು ಅವರು ತಿಳಿಸಿದ್ದಾರೆ.

<><><>

ವಿಜ್ಞಾನ ಮತ್ತು ತಂತ್ರಜ್ಞಾನದ ಅಂತಾರಾಷ್ಟ್ರೀಯ ಸಂಭ್ರಮಾಚರಣೆಯಾಗಿ ಮತ್ತು ಮನುಕುಲಕ್ಕೆ ನೀಡಿದ ಕೊಡುಗೆಯ ಸ್ಮರಣಾರ್ಥ ಜಗತ್ತಿನಾದ್ಯಂತ ಇಂದಿನಿಂದ ಇದೇ ೧೦ರ ವರೆಗೆ ವಿಶ್ವ ಬಾಹ್ಯಾಕಾಶ ಸಪ್ತಾಹವನ್ನು ಆಚರಿಸಲಾಗುತ್ತಿದೆ. ಈ ಸಪ್ತಾಹ ಅಕ್ಟೋಬರ್ ೪ರ ಮಾನವನಿರ್ಮಿತ ಮೊದಲ ಕೃತಕ ಉಪಗ್ರಹ ಸ್ಪುಟ್ನಿಕ್-೧ರ ಉಡಾವಣೆ ಮತ್ತು ಅಕ್ಟೋಬರ್ ೧೦ರ ಬಾಹ್ಯಾಕಾಶ ಒಪ್ಪಂದಕ್ಕೆ ಸಹಿ ಹಾಕಿದ ಸ್ಮರಣಾರ್ಥ ಪ್ರಮುಖವೆನಿಸಿದೆ. ಇದರ ಅಂಗವಾಗಿ ಜಗತ್ತಿನಾದ್ಯಂತ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಬೆಂಗಳೂರಿನ ಜವಾಹರಲಾಲ್ ನೆಹರು ತಾರಾಲಯದಲ್ಲಿ ವಿಜ್ಞಾನಾಭಿಮಾನಿಗಳಿಗೆ ಇಂದು ಮತ್ತು ನಾಳೆ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಎರಡು ದಿನಗಳ ಈ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಸ್ಪರ್ಧೆಗಳು, ಕಾರ್ಯಾಗಾರ ಹಾಗೂ ಸಾರ್ವಜನಿಕರಿಗೆ ಉಪನ್ಯಾಸಗಳ ಮೂಲಕ ಬಾಹ್ಯಾಕಾಶ ವಿಜ್ಞಾನವನ್ನು ಹತ್ತಿರದಿಂದ ಅರಿಯುವ ಅವಕಾಶ ಕಲ್ಪಿಸಲಾಗಿದೆ.

<><><>

ಜಮ್ಮು ಮತ್ತು ಕಾಶ್ಮೀರದಲ್ಲಿ ಪ್ರತಿಕೂಲ ಹವಾಮಾನ ಪರಿಸ್ಥಿತಿಯ ಕಾರಣ ಮಾತಾ ವೈಷ್ಣೋದೇವಿ ಯಾತ್ರೆಯು ನಾಳೆಯಿಂದ ಇದೇ ೭ರ ವರೆಗೆ ಸ್ಥಗಿತಗೊಳ್ಳಲಿದೆ. ಯಾತ್ರಾರ್ಥಿಗಳ ಸುರಕ್ಷತೆ ಮತ್ತು ಯೋಗಕ್ಷೇಮವನ್ನು ಗಮನದಲ್ಲಿಟ್ಟುಕೊಂಡು ಈ ನಿರ್ಧಾರ ಕೈಗೊಳ್ಳಲಾಗಿದೆ. ಮಾತಾ ವೈಷ್ಣೋದೇವಿ ದೇವಾಲಯ ಮಂಡಳಿಯು ತನ್ನ ಜಾಲತಾಣ ಮತ್ತು ಇತರ ಅಧಿಕೃತ ಸಂವಹನ ಮಾಧ್ಯಮಗಳ ಮೂಲಕ ಹೊರಡಿಸಿರುವ ನವೀಕರಣ ಮಾಹಿತಿಯನ್ನು ಅನುಸರಿಸುವಂತೆ ಭಕ್ತಾದಿಗಳಿಗೆ ಸೂಚಿಸಲಾಗಿದೆ.

<><><>

ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಇಂದು, ಶ್ರೇಷ್ಠ ಸ್ವಾತಂತ್ರ್ಯ ಹೋರಾಟಗಾರ ಸುಬ್ರಮಣ್ಯ ಶಿವ ಅವರಿಗೆ ಅವರ ಜನ್ಮ ವಾರ್ಷಿಕೋತ್ಸವದಂದು ಗೌರವ ನಮನ ಸಲ್ಲಿಸಿದರು. ಮಹಾಕವಿ ಸುಬ್ರಮಣ್ಯ ಭಾರತಿ ಮತ್ತು ವಿ.ಯು. ಚಿದಂಬರಂ ಪಿಳ್ಳೈ ಅವರುಗಳ ನಿಕಟವರ್ತಿ ಎಂದು

ಸುಬ್ರಮಣ್ಯ ಶಿವ ಅವರನ್ನು ಸ್ಮರಿಸಿದ ಉಪರಾಷ್ಟ್ರಪತಿ ಅವರು, ಅವರ ಅಚಲ ದೇಶಭಕ್ತಿ ಮತ್ತು ರಾಷ್ಟ್ರಕ್ಕಾಗಿ ಮಾಡಿದ ತ್ಯಾಗವನ್ನು ಶ್ಲಾಘಿಸಿದರು.

<><><><>

ಅಹಮದಾಬಾದ್‌ನಲ್ಲಿ ನಡೆಯುತ್ತಿರುವ ಭಾರತ - ವೆಸ್ಟ್ ಇಂಡೀಸ್ ನಡುವಿನ ಎರಡು ಪಂದ್ಯಗಳ ಟೆಸ್ಟ್ ಕ್ರಿಕೆಟ್ ಸರಣಿಯ ಮೊದಲ ಪಂದ್ಯದ ಮೂರನೇ ದಿನದಾಟದಲ್ಲಿಂದು ತನ್ನ ಎರಡನೇ ಇನ್ನಿಂಗ್ಸ್ ಆರಂಭಿಸಿದ ವೆಸ್ಟ್ ಇಂಡೀಸ್ ಪುನಃ ಆರಂಭಿಕ ಆಘಾತ ಅನುಭವಿಸಿದೆ. ಇತ್ತೀಚಿನ ವರದಿ ಬಂದಾಗ ವೆಸ್ಟ್ ಇಂಡೀಸ್ ೮ ವಿಕೆಟ್ ಗಳಿಗೆ ೯೮ ರನ್ ಗಳಿಸಿದೆ. ದಿನದಾಟದ ಅಂತ್ಯಕ್ಕೆ ನಿನ್ನೆ ಭಾರತ ತನ್ನ ಮೊದಲ ಇನ್ನಿಂಗ್ಸ್‌ನಲ್ಲಿ ಐದು ವಿಕೆಟ್‌ಗಳಿಗೆ ೪೪೮ ರನ್ ಗಳಿಸಿತ್ತು. ಇಂದಿನ ದಿನದಾಟದ ಆರಂಭದಲ್ಲಿ ಭಾರತ ಡಿಕ್ಲೇರ್ ಘೋಷಿಸಿತು.  ಇದಕ್ಕೂ ಮೊದಲು, ವೆಸ್ಟ್ ಇಂಡೀಸ್ ತನ್ನ ಮೊದಲ ಇನ್ನಿಂಗ್ಸ್‌ನಲ್ಲಿ ೧೬೨ ರನ್‌ಗಳಿಗೆ ಆಲೌಟ್ ಆಗಿತ್ತು.

<><><><>

ಆಸ್ಟ್ರೇಲಿಯಾದಲ್ಲಿ ನಡೆಯಲಿರುವ ಮೂರು ಪಂದ್ಯಗಳ ಏಕದಿನ ಕ್ರಿಕೆಟ್ ಸರಣಿಯ ಭಾಗವಾಗುವ ಮೂಲಕ ಭಾರತ ತಂಡದ ಪ್ರಮುಖ ಆಟಗಾರರಾದ ರೋಹಿತ್ ಶರ್ಮಾ ಹಾಗೂ ವಿರಾಟ್ ಕೊಹ್ಲಿ ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ಮರಳಲು ಸಜ್ಜಾಗಿದ್ದಾರೆ.    ಭಾರತದ ಆಸ್ಟ್ರೇಲಿಯಾ ಪ್ರವಾಸ, ಏಕದಿನ ಸರಣಿಯೊಂದಿಗೆ ಆರಂಭವಾಗಲಿದ್ದು, ಇದೇ ೧೯ರಿಂದ ೨೫ರವರೆಗೆ ಮೂರು ಏಕದಿನ ಪಂದ್ಯಗಳು, ನಂತರ ಇದೇ ೨೯ರಿಂದ ನವೆಂಬರ್ ೮ರ ವರೆಗೆ ೫ ಪಂದ್ಯಗಳ ಅಂತಾರಾಷ್ಟ್ರೀಯ ಟಿ-೨೦ ಸರಣಿ ನಡೆಯಲಿದೆ. ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ - ಬಿಸಿಸಿಐ ಇಂದು ಏಕದಿನ ಹಾಗೂ ಟಿ-೨೦ ತಂಡಗಳನ್ನು ಪ್ರಕಟಿಸುವ ನಿರೀಕ್ಷೆ ಇದೆ.  ರೋಹಿತ್ ಹಾಗೂ ವಿರಾಟ್ ಪ್ರಸ್ತುತ ಏಕದಿನ ಮಾದರಿಯಲ್ಲಿ ಮಾತ್ರ ಆಡುತ್ತಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>